# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 144 (1127)

ಸದಸ್ಯರ ಹೆಸರು : ಡಾ: ಚಂದ್ರಶೇಖರ್ ಬಿ ಪಾಟೀಲ (ಪದವೀಧರರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 07.03.2022

ಉತ್ತರಿಸಬೇಕಾದ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದ ಖಾಸಗಿ ಕನ್ನಡ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಬೇಕೆಂಬ ಬೇಡಿಕೆಯು ಸರ್ಕಾರದ ಮುಂದೆ ಇದೆಯೇ; | ಕಲ್ಯಾಣ ಕರ್ನಾಟಕವೂ ಒಳಗೊಂಡಂತೆ ಸಮಗ್ರ ಕರ್ನಾಟಕದ ಖಾಸಗಿ ಕನ್ನಡ ಶಾಲಾ-ಕಾಲೇಜುಗಳನ್ನು ದಿನಾಂಕ: 01.06.1987 ರಿಂದ 1994-95ನೇ ಅವಧಿಯಲ್ಲಿ, ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸಿ ವಿಚ್ಛಿನ್ನತೆ ಇಲ್ಲದೇ ಸತತವಾಗಿ ನಡೆದು ಕೊಂಡು ಬಂದ ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಕ್ರಮವಹಿಸಲಾಗಿದೆ.<br>1995ರ ನಂತರ ಆರಂಭವಾದ ಅನುದಾನ ರಹಿತ ಕನ್ನಡ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ, ಸದರಿ ಶಾಲಾ |
| ಆ) | ಹಾಗಿದ್ದಲ್ಲಿ, ಸರ್ಕಾರವು ಇಲ್ಲಿಯವರೆಗೆ ಬೇಡಿಕೆಗೆ ಸ್ಪಂದಿಸದೇ ಇರುವುದಕ್ಕೆ ಕಾರಣವೇನು; | |
| ಇ) | ಶಾಲೆಗಳಿಗೆ ಅನುದಾನ ನೀಡಲಾಗುವುದು ಯಾವಾಗ? | |

| | | |
|---|---|---|
| | | ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ 1995 ರಿಂದ 2019 ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳೆಷ್ಟು? ಸದರಿ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು / ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಕ್ರೋಢೀಕೃತ ಮಾಹಿತಿಯನ್ನು ಪಡೆಯಲು ತೀರ್ಮಾನಿಸಲಾಯಿತು. ಅದರಂತೆ, ಎಲ್ಲಾ ಮೂರು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಮಾಹಿತಿಯನ್ನು ಪಡೆಯಲು ಕ್ರಮವಹಿಸಲಾಗಿರುತ್ತದೆ. |

ಇಪಿ 63 ಪಿಎಂಸಿ 2022

( ಬಿ.ಸಿ.ನಾಗೇಶ್ )
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.